ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಶೇಷಾದ್ರಿ ರಸ್ತೆ, ಬೆಂಗಳೂರು,
ದಿನಾಂಕ: 01.10.2024.

ಸಂಖ್ಯೆ: ಕಾಶಿಇ/ಶೈವಿ/22/ಸುತ್ತೋಲೆ/2023-24

# ಸುತ್ತೋಲೆ

ವಿಷಯ: ರಾಜ್ಯದ ಎಲ್ಲಾ ಸರ್ಕಾರಿ / ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ನಡೆಯುವ ವಿಶ್ವವಿದ್ಯಾಲಯಗಳ ಪರೀಕ್ಷಾ ಮೌಲ್ಯಮಾಪನ ಕಾರ್ಯಗಳಿಗೆ ಉಪನ್ಯಾಸಕರುಗಳು ಕಡ್ಡಾಯವಾಗಿ ಹಾಜರಾಗುವ ಬಗ್ಗೆ.

ಉಲ್ಲೇಖ:
1. ಕುಲಸಚಿವರು (ಮೌಲ್ಯಮಾಪನ), ಕುವೆಂಪು ವಿಶ್ವವಿದ್ಯಾಲಯ, ಜ್ಞಾನಸಹ್ಯಾದ್ರಿ, ಹೆಸರಘಟ್ಟ-577 451 ಇವರ ಅಧಿಕೃತ ಜ್ಞಾಪನ ಸಂಖ್ಯೆ: ಕುವಿ:ಪವಿ:ಎಸ್‌ಪಿ/2: 4841: 2023-24 ದಿನಾಂಕ: 21-09-2023.
2. ಕುಲಸಚಿವರು (ಮೌಲ್ಯಮಾಪನ), ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ ಇವರ ಪತ್ರ ಸಂಖ್ಯೆ: ರಾಚವಿ/ಬೆಳಗಾವಿ/ಪವಿ/2023-24/764 ದಿನಾಂಕ: 15-05-2024.

*******

ಪ್ರಸ್ತಾಪಿತ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರಗಳಲ್ಲಿ ವಿಶ್ವವಿದ್ಯಾಲಯಗಳ ಪರೀಕ್ಷೆಗಳು ಮುಗಿದ ತಕ್ಷಣ ಉತ್ತರ ಪತ್ರಿಕೆಗಳನ್ನು ಮೌಲ್ಯಮಾಪನ ಮಾಡಿ, ನಿಗಧಿತ ಸಮಯಕ್ಕೆ ಫಲಿತಾಂಶ ಪ್ರಕಟಿಸಲು ಕಾಲೇಜುಗಳ ಉಪನ್ಯಾಸಕರನ್ನು ಮೌಲ್ಯಮಾಪನ ಕಾರ್ಯಗಳಿಗೆ ನಿಯೋಜಿಸಲಾಗುತ್ತಿದ್ದು, ಕೆಲವೊಂದು ಬಾರಿ ಮೌಲ್ಯಮಾಪನಕ್ಕೆ ನಿಯೋಜಿಸಿದ ಉಪನ್ಯಾಸಕರು ಈ ಕಾರ್ಯಗಳಿಗೆ ಅಸಹಕಾರ ತೋರಿ ಮೌಲ್ಯಮಾಪನ ಕಾರ್ಯಗಳಿಗೆ ಹಾಜರಾಗದೆ ಪರೀಕ್ಷಾ ಫಲಿತಾಂಶಗಳನ್ನು ನಿಗದಿತ ಸಮಯಕ್ಕೆ ಪ್ರಕಟಿಸಲು ಸಾಧ್ಯವಾಗದೆ ವಿದ್ಯಾರ್ಥಿಗಳಿಗೆ ತುಂಬಾ ತೊಂದರೆಯಾಗುತ್ತಿರುವುದಾಗಿ ತಿಳಿಸಲಾಗಿರುತ್ತದೆ. ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ, ಈಗಾಗಲೇ ಅನೇಕ ಬಾರಿ ಸುತ್ತೋಲೆಗಳನ್ನು ಹೊರಡಿಸಲಾಗಿರುತ್ತದೆ.

ಪ್ರತಿಯೊಬ್ಬ ಉಪನ್ಯಾಸಕರು ಅವರಿಗೆ ವಹಿಸಲಾದ ಬೋಧನೆ ಪರೀಕ್ಷೆ ಮೌಲ್ಯಮಾಪನ ಮತ್ತು ಶೈಕ್ಷಣಿಕ ಕಾರ್ಯಗಳಿಗೆ ಸಂಬಂಧಿಸಿದ ಕೆಲಸಗಳನ್ನು ಕಡ್ಡಾಯವಾಗಿ ಮತ್ತು ಪ್ರಾಮಾಣಿಕವಾಗಿ ನಿರ್ವಹಿಸುವುದು ಆದ್ಯ ಕರ್ತವ್ಯವಾಗಿರುತ್ತದೆ. ಆದುದರಿಂದ ಪ್ರತಿಯೊಬ್ಬ ಅಧ್ಯಾಪಕರು ಪರೀಕ್ಷಾ ಕಾರ್ಯಗಳಿಗೆ / ಮೌಲ್ಯಮಾಪನ ಕಾರ್ಯಗಳಿಗೆ ಕರೆ ಬಂದಲ್ಲಿ ಅಥವಾ ನಿಯೋಜಿಸಿದಲ್ಲಿ ಯಾವುದೇ ಸಬೂಬು ಮತ್ತು ಕಾರಣಗಳನ್ನು ನೀಡದೆ ಈ ಕಾರ್ಯಗಳನ್ನು ತುರ್ತು ಎಂದು ಪರಿಗಣಿಸಿ, ತೊಡಗಿಸಿಕೊಳ್ಳಲು ಈಗಾಗಲೇ ಸೂಚಿಸಲಾಗಿರುತ್ತದೆ.

ಹಾಗೂ ಕಾಲೇಜಿನ ಪ್ರಾಂಶುಪಾಲರುಗಳು ಸಂಬಂಧಿಸಿದ ಅಧ್ಯಾಪಕರುಗಳನ್ನು ಪರೀಕ್ಷಾ ಮೌಲ್ಯಮಾಪನ ಕಾರ್ಯಕ್ಕೆ ಬಿಡುಗಡೆ ಮಾಡಿ, ವಿಶ್ವವಿದ್ಯಾಲಯದಿಂದ ಹಾಜರಾತಿ ಪ್ರಮಾಣ ಪತ್ರವನ್ನು

ಪಡೆದು, ಒಪ್ಪಿಸುವ ನಿಬಂಧನೆಗೊಳಪಟ್ಟಂತೆ, ಕೆಸಿಎಸ್‌ಆರ್ ನಿಯಮ Appendix II B ಪ್ರಕಾರ ವಿಶೇಷ ಸಾಂಧರ್ಬಿಕ ರಜೆಯನ್ನು ಮಂಜೂರು ಮಾಡಬಹುದಾಗಿದೆ ಹಾಗೂ ಈ ಕಾರ್ಯಕ್ಕೆ ಅನಧಿಕೃತ ಗೈರು ಹಾಜರಾಗುವ ಅಧ್ಯಾಪಕರ ವಿರುದ್ಧ ಸೂಕ್ತ ಶಿಸ್ತು ಕ್ರಮ ಕೈಗೊಳ್ಳಲಾಗುವುದು.

ಮುಂದುವರೆದು, ಸರ್ಕಾರಿ ಕಾಲೇಜುಗಳ ಪ್ರಾಂಶುಪಾಲರುಗಳು, ಅಧ್ಯಾಪಕರುಗಳು ಮೌಲ್ಯಮಾಪನಕ್ಕೆ ಹಾಜರಾದ ಬಗ್ಗೆ ಸಂಬಂಧಿಸಿದ ವಿಶ್ವವಿದ್ಯಾಲಯದಿಂದ ಹಾಜರಾತಿ ಪ್ರಮಾಣ ಪತ್ರವನ್ನು ಸಂಬಂಧಿಸಿದ ಪ್ರಾಂಶುಪಾಲರಿಗೆ ಸಲ್ಲಿಸಿದ ನಂತರವೇ ವೇತನ ಬಿಡುಗಡೆಗೊಳಸಲು ಸೂಚಿಸಲಾಗಿದೆ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳಗೆ ಸಂಬಂಧಿಸಿದಂತೆ ಪ್ರಾದೇಶಿಕ ಜಂಟಿ ನಿರ್ದೇಶಕರುಗಳೂ ಇವರ ವ್ಯಾಪ್ತಿಗೆ ಬರುವ ಕಾಲೇಜುಗಳ ಉಪನ್ಯಾಸಕರು ಪರೀಕ್ಷಾ ಮೌಲ್ಯಮಾಪನ ಕಾರ್ಯದಲ್ಲಿ ಭಾಗವಹಿಸಿದ ಬಗ್ಗೆ ಹಾಜರಾತಿ ಪ್ರಮಾಣ ಪತ್ರವನ್ನು ಪಡೆದ ನಂತರ ಈ ಕಾಲೇಜಿನ ವೇತನ ಬಿಡುಗಡೆ ಮಾಡುವಂತೆ ಸೂಚಿಸಲಾಗಿದೆ. ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಸಮಯಕ್ಕೆ ಸರಿಯಾಗಿ ಮೌಲ್ಯಮಾಪನ ಕಾರ್ಯಗಳನ್ನು ಮುಗಿಸಿ ಫಲಿತಾಂಶವನ್ನು ಪ್ರಕಟಿಸಲು ಸಂಬಂಧಿಸಿದ ವಿಶ್ವವಿದ್ಯಾಲಯಕ್ಕೆ ಸಹಕಾರ ನೀಡಲು ಆಯಾ ಪ್ರಾದೇಶಿಕ ಜಂಟಿ ನಿರ್ದೇಶಕರುಗಳನ್ನು ಮೇಲ್ವಿಚಾರಕರಾಗಿ ನಿಯುಕ್ತಿಗೊಳಸಲಾಗಿದೆ.

**ಕಾಲೇಜು ಶಿಕ್ಷಣ ಆಯುಕ್ತರು**

ಇವರಿಗೆ:

1. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ, ಗುಲಬರ್ಗಾ.
2. ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರು, – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ (ಪ್ರಾಂಶುಪಾಲರು ತಮ್ಮ ಕಾಲೇಜಿನ ಎಲ್ಲಾ ಉಪನ್ಯಾಸಕರುಗಳ ಗಮನಕ್ಕೆ ತಂದು ಕಟ್ಟುನಿಟ್ಟಾಗಿ ಮೌಲ್ಯಮಾಪನ ಕಾರ್ಯಗಳಿಗೆ ಹಾಜರಾಗಲು ಸೂಚಿಸಲು ತಿಳಿಸಲಾಗಿದೆ.)

ಪ್ರತಿ ರವಾನೆ:

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಎಲ್ಲಾ ವಿಶ್ವವಿದ್ಯಾಲಯಗಳ ಕುಲಸಚಿವರಿಗೆ – ಮಾಹಿತಿಗಾಗಿ.
3. ಕಛೇರಿ ಪ್ರತಿ.